# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಭಾರತ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯಡಿ ಆರ್ಥಿಕ ನೆರವು ಪಡೆಯಲು ಅರ್ಹರಾಗಿರುವ ಎಲ್ಲಾ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ. 4,000/-ಗಳನ್ನು ಎರಡು ಸಮಾನ ಕಂತುಗಳಲ್ಲಿ (ರೂ. 2000/- ಪ್ರತಿ ಕಂತು) ನೇರ ನಗದು ವರ್ಗಾವಣೆ ಮುಖಾಂತರ ನೆರವು ನೀಡುವ ಬಗ್ಗೆ.

ಓದಲಾಗಿದೆ: ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಜಕೃನಿ(ವಿ.ತ.ಇಲ)/ತಾಂ2 /ಪಿ.ಎಂ.ಕಿ/ಸ.ಟಿ/134/2019-20, ದಿನಾಂಕ: 26.07.2019.

*****

**ಪ್ರಸ್ತಾವನೆ:**

ಭಾರತ ಸರ್ಕಾರವು ರೈತ ಕುಟುಂಬಕ್ಕೆ ವಿವಿಧ ಕೃಷಿ ಪರಿಕರಗಳನ್ನು ಖರೀದಿಸಲು ತನ್ಮೂಲಕ ಉತ್ತಮ ಬೆಳೆ ಹಾಗೂ ಇಳುವರಿ ಪಡೆಯಲು ಸಹಕಾರಿಯಾಗುವಂತೆ ಆರ್ಥಿಕ ನೆರವು ನೀಡಲು PM-KISAN ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಡಿ (ಮಾರ್ಗಸೂಚಿಯನ್ವಯ ಅರ್ಹತೆ / ಅನರ್ಹತೆಗೊಳಪಟ್ಟು) ಸಾಗುವಳಿ ಜಮೀನು ಹೊಂದಿರುವ ಪ್ರತಿ ರೈತ ಕುಟುಂಬದ ಒಬ್ಬರು ಸದಸ್ಯರಿಗೆ ರೂ.2,000/-ರಂತೆ ಮೂರು ಕಂತುಗಳಲ್ಲಿ ವಾರ್ಷಿಕ ರೂ.6,000.00ಗಳ ಆರ್ಥಿಕ ನೆರವು ನೀಡಲಾಗುತ್ತಿದೆ. ಸದರಿ ಅನುದಾನವು ಕೇಂದ್ರ ಸರ್ಕಾರದಿಂದ ಅರ್ಹ ಫಲಾನುಭವಿ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾವಣೆಗೊಳ್ಳುತ್ತದೆ. ಇಂತಹ ಅರ್ಹ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಒಂದು ಕಂತಿನ ರೂ.2,000.00ಗಳನ್ನು ವಾರ್ಷಿಕವಾಗಿ ನೀಡಲು ಪ್ರಸ್ತಾವಿಸಿದೆ.

ಮೇಲೆ ಓದಲಾದ (1)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, ಕೃಷಿ ಚಟುವಟಿಕೆಗಳಿಗೆ ಕೆಲವು ದುಬಾರಿ ಪರಿಕರಗಳನ್ನು ಒಳಗೊಂಡಂತೆ ಬಹಳಷ್ಟು ಪರಿಕರಗಳನ್ನು ಬಳಸುತ್ತಿದ್ದು, ರಾಜ್ಯ ಸರ್ಕಾರದಿಂದ ಉತ್ತಮ ಕೃಷಿ ಪರಿಕರಗಳನ್ನು ಬಳಸಲು ನೆರವಾಗಲು ಹೆಚ್ಚುವರಿಯಾಗಿ ರೂ.2,000/-ಗಳ ಆರ್ಥಿಕ ನೆರವನ್ನು ನೀಡಲು ಪ್ರಸ್ತಾವಿಸಿದೆ. ಸದರಿ ನೆರವನ್ನು PM-KISAN ಯೋಜನೆಯಡಿ ನೆರವು ಪಡೆಯಲು ಅರ್ಹರಿರುವ ರೈತರಿಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ. 2000.00ದಂತೆ ಒಂದು ಕಂತಿನ ನೆರವು ನೀಡುವ ಕುರಿತು ಪ್ರಸ್ತಾವನೆಯನ್ನು ಮುಂದಿನ ಕ್ರಮಕ್ಕಾಗಿ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 9 ಕೃಉಇ 2019, ಬೆಂಗಳೂರು, ದಿನಾಂಕ: 17.08.2019.**

ಭಾರತ ಸರ್ಕಾರದ PM-KISAN ಯೋಜನೆಯಡಿ ನೆರವು ಪಡೆಯಲು ಅರ್ಹರಿರುವ ರಾಜ್ಯದ ಎಲ್ಲಾ ರೈತರಿಗೆ ಉತ್ತಮ ಕೃಷಿ ಪರಿಕರಗಳನ್ನು ಬಳಸಲು ನೆರವಾಗಲು ಹೆಚ್ಚುವರಿಯಾಗಿ ರಾಜ್ಯ ಸರ್ಕಾರದಿಂದ ರೂ. 4,000.00ಗಳನ್ನು ಎರಡು ಸಮಾನ ಕಂತುಗಳಲ್ಲಿ (ರೂ. 2000/- ಪ್ರತಿ ಕಂತು) ನೇರ ನಗದು ವರ್ಗಾವಣೆ ಮುಖಾಂತರ ಆರ್ಥಿಕ ನೆರವು ನೀಡಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

ಈ ಯೋಜನೆಗೆ ತಗಲುವ ವೆಚ್ಚವನ್ನು ಮೊದಲಿಗೆ ಸಾದ್ವಿಲಾರು ನಿಧಿ (Contingency fund) ಲೆಕ್ಕ ಶೀರ್ಷಿಕೆ: 8000-00-224-0-00-Miscellaneous General Services ಅಡಿ ಭರಿಸತಕ್ಕದ್ದು.

ಸದರಿ ಅನುದಾನವನ್ನು 2019-20ನೇ ಸಾಲಿನ ಪೂರಕ ಅಂದಾಜು-2ರಲ್ಲಿ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-05ರ ಉಪ ಶೀರ್ಷಿಕೆ: 100ರಡಿ ಒದಗಿಸಲಾಗುವ ಅನುದಾನದಿಂದ ಸಾಧ್ವಿಲಾರು ನಿಧಿಗೆ ಮರುಭರಣ ಮಾಡತಕ್ಕದ್ದು.

ಕೃಷಿ ನಿರ್ದೇಶಕರು ಈ ಯೋಜನೆಯ DDO ಆಗಿರುವುದರಿಂದ, ಅವರಿಗೆ ನೀಡಲಾದ DDO ಕೋಡನ್ನು ಬಳಸಿ ಹಣ ಸೆಳೆಯಬಹುದಾಗಿದೆ. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಯಾವುದೇ ಮೊತ್ತವನ್ನು ಆರ್ಥಿಕ ಇಲಾಖೆಯು ಸಾಧ್ವಿಲಾರು ನಿಧಿಯಿಂದ ಹಣವನ್ನು ಬಿಡುಗಡೆ ಮಾಡಿ ಪ್ರತ್ಯೇಕ ಆದೇಶವನ್ನು ಹೊರಡಿಸುವವರೆಗೆ ಸೆಳೆಯತಕ್ಕದ್ದಲ್ಲ.

.2...

ಹಣ ಸೆಳೆಯುವ ಅಧಿಕಾರಿಯು ಸಾಧ್ವಿಲಾರು ನಿಧಿಯಿಂದ ಹಣವನ್ನು ಸೆಳೆಯಲು ಬಿಲ್ಲುಗಳನ್ನು ಸಲ್ಲಿಸತಕ್ಕದ್ದು. ಈ ಸಂಬಂಧ ಆರ್ಥಿಕ ಇಲಾಖೆಯು ಹೊರಡಿಸುವ ಪ್ರತ್ಯೇಕ ಆದೇಶವನ್ನು ಲಗತ್ತಿಸಿದ್ದಲ್ಲಿ ಮಾತ್ರ ಖಜಾನೆಯು ಹಣವನ್ನು ಬಿಡುಗಡೆ ಮಾಡತಕ್ಕದ್ದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 588 ವೆಚ್ಚ-4, ದಿನಾಂಕ: 13.08.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 588 ವೆಚ್ಚ-4/2018, ದಿನಾಂಕ: 13.08.2019ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B.S.Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)
17/08/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ,
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ , ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ. ಬೆಂಗಳೂರು.
12. ಆಯುಕ್ತರು, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು.
13. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
14. ಆಯುಕ್ತರು/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಆಯುಕ್ತರು/ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
16. ಡೆಪ್ಯುಟಿ ಡೈರೆಕ್ಟರ್ ಜನರಲ್ & ಸ್ಟೇಟ್ ಇನ್ಫರ್ಮ್ಯಾಟಿಕ್ಸ್ ಆಫೀಸರ್, ಬೆಂಗಳೂರು.
17. ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಸದಸ್ಯರು, ಬೆಂಗಳೂರು.
18. ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್, ಬೆಂಗಳೂರು.
19. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
20. ಎಲ್ಲಾ ಜಿಲ್ಲೆಗಳ ಜಂಟಿ ನಿರ್ದೇಶಕರು, ಕೃಷಿ ಇಲಾಖೆ.
21. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
22. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
23. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
24. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
25. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
26. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(ಕ್ರಮ ಸಂಖ್ಯೆ: 16ರಿಂದ 20ರವರೆಗೆ ಆಯುಕ್ತರು, ಕೃಷಿ ಇಲಾಖೆ ಇವರ ಮುಖಾಂತರ)